ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಸಂಖ್ಯೆ ಎಷ್ಟು;(ವಿಷಯವಾರು ವಿವರ ನೀಡುವುದು);

ಸದರಿ ಕಾಲೇಜಿನ ವಾಣಿಜ್ಯಶಾಸ್ತ್ರ ವಿಭಾಗದಲ್ಲಿ ಎರಡು ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ.

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇಂತಹ ಕಾಲೇಜುಗಳ ವಿವಿಧ ವಿಷಯಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಕಾರ್ಯಭಾರವನ್ನು ನಿರ್ವಹಿಸುವ ಸಲುವಾಗಿ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಕಾಲೇಜುಗಳ ಪ್ರಾಂಶುಪಾಲರಿಗೆ ಅಧಿಕಾರ ನೀಡಲಾಗಿದೆ. ಅದಲ್ಲದೆ ಉಪನ್ಯಾಸಕರ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ತುಂಬಲು ಪ್ರಸ್ತಾವನೆ ಸಲ್ಲಿಸಿದ್ದು ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಇ) ಸದರಿ ಹುದ್ದೆಗಳನ್ನು ಎಂದು ಭರ್ತಿ ಮಾಡಲಾಗುವುದು?

ಕರ್ನಾಟಕ ಲೋಕ ಸೇವಾ ಆಯೋಗದಿಂದ ಅಭ್ಯರ್ಥಿಗಳ ಪಟ್ಟಿಗಳನ್ನು ಸ್ವೀಕರಿಸಿದ ನಂತರ ನೇಮಕಾತಿ ಮಾಡಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (291)300
ಸದಸ್ಯರ ಹೆಸರು : ಶ್ರೀ ಹ್ಯಾರೀಸ್ ಎನ್.ಎ
ಉತ್ತರಿಸುವ ಸಚಿವರು : (ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ವಿವಿಧ ಮಾಧ್ಯಮವಾರು ವಿವರ ನೀಡುವುದು;

ಸರ್ಕಾರಿ ಪ್ರಾಥಮಿಕ ಶಾಲೆಗಳು

ಮಾಧ್ಯಮ	ಬೆಂಗಳೂರು ದಕ್ಷಿಣ ಜಿಲ್ಲೆ	ಬೆಂಗಳೂರು ಉತ್ತರ ಜಿಲ್ಲೆ
ಕನ್ನಡ	1216	421
ಆಂಗ್ಲ	11	–
ತಮಿಳು	31	11
ತೆಲುಗು	08	08
ಉರ್ದು	178	71
ಹಿಂದಿ	01	–
ಒಟ್ಟು	**1445**	**511**

ಆ) ಈ ಶಾಲೆಗಳಲ್ಲಿ ಎಷ್ಟು ಶಾಲೆಗಳು ಸ್ವಂತ ಕಟ್ಟಡ ಮತ್ತಿತರ ಮೂಲಭೂತ ಸೌಲಭ್ಯಗಳನ್ನು ಹೊಂದಿವೆ;

- <u>ಬೆಂಗಳೂರು ದಕ್ಷಿಣ ಜಿಲ್ಲೆ:</u> ಸ್ವಂತ ಕಟ್ಟಡಗಳು ಹೊಂದಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ – 1220
- ಬಹುತೇಕ ಎಲ್ಲಾ ಶಾಲೆಗಳು ಮೂಲಭೂತ ಸೌಲಭ್ಯಗಳನ್ನು ಹೊಂದಿದ್ದು, ಕೆಲವು ಶಾಲೆಗಳಲ್ಲಿ ಮಾತ್ರ ಕುಡಿಯುವ ನೀರು ಹಾಗೂ ಶೌಚಾಲಯದ ನಿರ್ವಹಣೆಯ ಕೊರತೆ ಇರುತ್ತದೆ. ಇದನ್ನು ಶಾಲಾ ಹಂತದಲ್ಲಿಯೇ ಸರಿಪಡಿಸುವ ವ್ಯವಸ್ಥೆ ಮಾಡಲಾಗಿದೆ.
- <u>ಬೆಂಗಳೂರು ಉತ್ತರ ಜಿಲ್ಲೆ:</u> ಸ್ವಂತ ಕಟ್ಟಡಗಳಿರುವ ಶಾಲೆಗಳ ಸಂಖ್ಯೆ: 488, 511 ಶಾಲೆಗಳ ಪೈಕಿ 35 ಶಾಲೆಗಳಿಗೆ ಮೂಲಭೂತ ಸೌಲಭ್ಯಗಳ ಕೊರತೆ ಇದ್ದು, ಈ ಸೌಲಭ್ಯಗಳನ್ನು ಸರ್ವ ಶಿಕ್ಷಣ ಅಭಿಯಾನ, ಪಂಚಸೌಲಭ್ಯ, ಸಾರ್ವಜನಿಕ ಅನುದಾನಗಳ ಸಹಾಯದಡಿಯಲ್ಲಿ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಅವುಗಳಲ್ಲಿ ಶಿಕ್ಷಣ ಪಡೆಯುತ್ತಿರುವ ಒಟ್ಟು ಮಕ್ಕಳ ಸಂಖ್ಯೆ ಹಾಗೂ ಕೊರತೆ ಇರುವ ಶಿಕ್ಷಕರುಗಳ ಸಂಖ್ಯೆ ಎಷ್ಟು ಹಾಗೂ ಮಕ್ಕಳ ಸಂಖ್ಯೆಗನುಗುಣವಾಗಿ ಶಿಕ್ಷಕರು ಕಾರ್ಯನಿರ್ವಹಿಸುವರೇ; ಹಾಗಿಲ್ಲದಿದ್ದಲ್ಲಿ, ಅದನ್ನು ಸರಿದೂಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

- <u>ಬೆಂಗಳೂರು ದಕ್ಷಿಣ ಜಿಲ್ಲೆ:</u>

ಸರ್ಕಾರಿ ಪ್ರಾಥಮಿಕ ಶಾಲೆ ಮಕ್ಕಳ ಸಂಖ್ಯೆ:	2,22,002
ಮಂಜೂರಾದ ಶಿಕ್ಷಕರ ಸಂಖ್ಯೆ	6,870
ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರು	6,594
ಕೊರತೆ ಇರುವ ಶಿಕ್ಷಕರು	276

ಪ್ರತಿ ಪ್ರಾಥಮಿಕ ಶಾಲೆಯಲ್ಲಿ ಇಬ್ಬರು ಶಿಕ್ಷಕರಿದ್ದು, ಕೆಲವು ಶಾಲೆಗಳಲ್ಲಿ ಅನುಪಾತದ ವ್ಯತ್ಯಾಸವಿದ್ದು, ಕಾರ್ಯಭಾರವಿಲ್ಲದ ಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರನ್ನು ಗುರುತಿಸಿ, ಕಾರ್ಯಭಾರವಿರುವ ಶಾಲೆಗಳಿಗೆ ಸ್ಥಳಾಂತರಿಸಿ, ಮಕ್ಕಳ ಪಾಠಪ್ರವಚನಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಲಾಗಿದೆ. ಜಿಲ್ಲೆಯ ಶಿಕ್ಷಕರ ಮತ್ತು ಮಕ್ಕಳ ಅನುಪಾತ 1:35 ಇರುತ್ತದೆ.

<u>ಬೆಂಗಳೂರು ಉತ್ತರ ಜಿಲ್ಲೆ:</u>

ಬೆಂಗಳೂರು ಉತ್ತರ ಜಿಲ್ಲೆಯಲ್ಲಿ 88,723 ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿದ್ದಾರೆ. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳ ಮತ್ತು ಶಿಕ್ಷಕರ ಸಂಖ್ಯೆಗನುಗುಣವಾಗಿ

ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದು, ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಅನುಪಾತ 1:36 ಇರುತ್ತದೆ.

ಈ) ಶಾಂತಿನಗರ (ಬೆಂಗಳೂರು) ಕ್ಷೇತ್ರ ವ್ಯಾಪ್ತಿಯಲ್ಲಿ ಇರುವ ಸರ್ಕಾರಿ ವಿವಿಧ ಮಾಧ್ಯಮದ ಶಾಲೆಗಳು ಮತ್ತು ಮಕ್ಕಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)?

ಶಾಂತಿನಗರ ಕ್ಷೇತ್ರವು ಬೆಂಗಳೂರು ದಕ್ಷಿಣ ಜಿಲ್ಲೆಗೆ ಒಳಪಡುತ್ತದೆ

ಮಾಧ್ಯಮ	ಶಾಲೆಗಳ ಸಂಖ್ಯೆ	ಮಕ್ಕಳ ಸಂಖ್ಯೆ
ಕನ್ನಡ	12	2268
ಆಂಗ್ಲ	03	4133
ತಮಿಳು	03	159
ತೆಲುಗು	02	265
ಉರ್ದು	02	53
ಹಿಂದಿ	01	41
ಒಟ್ಟು	**23**	**6929**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (425)301
ಸದಸ್ಯರ ಹೆಸರು : ಶ್ರೀ ಜಯಚಂದ್ರ ಟಿ.ಬಿ(ಶಿರಾ)
ಉತ್ತರಿಸುವ ಸಚಿವರು : (ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

ಅ) ಶಿರಾದಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿರುವುದರಿಂದಾಗಿ ಉರ್ದು ಮಾಧ್ಯಮದಲ್ಲಿ ಓದುತ್ತಿದ್ದು ಇವರಿಗೆ ಅನುಕೂಲವಾಗಲು ಹಾಲಿ ಖಾಲಿ ಕಟ್ಟಡಗಳಿರುವುದು (ರೇಷ್ಮೆ ಇಲಾಖೆಗೆ ಸೇರಿದ್ದು) ಸರ್ಕಾರದ ಗಮನಕ್ಕೆ ಬಂದಿದೆಯೇ;

ಸರ್ಕಾರದ ಗಮನಕ್ಕೆ ಬಂದಿದೆ.

ಆ) ಹಾಗಿದ್ದಲ್ಲಿ ಸಿಲ್ಕ್ ಫಾರಂನಲ್ಲಿ ಆಂಗ್ಲ ಮಾಧ್ಯಮದ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡುವಾಗ ಬೋಧನಾ ಮಾಧ್ಯಮ ನಮೂದಿಸುವುದಿಲ್ಲ. ಕನ್ನಡ ಮತ್ತು ಆಂಗ್ಲ ಮಾಧ್ಯಮಗಳಲ್ಲಿ ತರಗತಿಗಳನ್ನು ನಡೆಸಲಾಗುತ್ತದೆ. ಪ್ರಸ್ತುತ ಶೈಕ್ಷಣಿಕ ಸಾಲಿನ ಶೈಕ್ಷಣಿಕ ಚಟುವಟಿಕೆಗಳು ಈಗಾಗಲೇ ಪ್ರಾರಂಭವಾಗಿರುವುದರಿಂದ ಈ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಿರುವುದಿಲ್ಲ.